ಬೆಂಗಳೂರು ಡಿಸ್ಟ್ರಿಕ್ಟು.

ಬೆಂಗಳೂರು ಸಬ್‌ಜಡ್ಜ್‌ರವರ ಕೋರ್ಟಿನಲ್ಲಿ—

ಸ್ರ 1884ನೇ ಇಸವಿ ಅರ್ಜೀ ನಂಬರ್ 121.

ಮೃತಪಟ್ಟ ನರಸಿಹ್ಮಯ್ಯನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರು ಮದ್ದಗಿರಿ ತಾ॥ ಕೊಡಗೇಹಳ್ಳಿ ಹೋಬಳಿ ಕೀಕದಾರ್ ಹಂಚಿನಾಳು ಸುಬ್ಬಂಣನು, ಮೃತಪಟ್ಟ ಸದರೀ ನರಸಿಹ್ಮಯ್ಯನವರಿಗೆ ಅವಿಭಕ್ತ ಸಹೋದರನಾಗಬೇಕೆಂಬ ಹಕ್ಕುದಾರಿ ಮೇಲೆ ಕೊಡಗೇಹಳ್ಳಿ ಸ್ಥಳದ ಕೀಕದಾರ ಸುಬ್ಬಂಣನವರು ಹಂಚಿನಾಳು ವಾಸಸ್ಥರಾಗಿ ಮೃತಪಟ್ಟ ನರಸಿಹ್ಮಯ್ಯನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಸುಬ್ಬಂಣನವರ ಅರ್ಜೀಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 28ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನರಸಿಹ್ಮಯ್ಯನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1884ನೇ ಇಸವಿ ಅರ್ಜೀ ನಂಬರ್ 124.

ಮೃತಪಟ್ಟ ಹುಚ್ಚಯ್ಯನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರು ಬೆಂಗಳೂರು ಸ್ಥಳದ ಕೆಂಪಂಣನು ಮೃತಪಟ್ಟ ಸದರೀ ಹುಚ್ಚಯ್ಯನವರಿಗೆ ಅವಿಭಕ್ತ ದೊಡ್ಡಪ್ಪನಾಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ಸ್ಥಳದ ಕೆಂಪಂಣನು ಡಿಟೋ ವಾಸಸ್ಥರಾಗಿ ಮೃತಪಟ್ಟ ಹುಚ್ಚಯ್ಯನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಕೆಂಪಂಣನವರ ಅರ್ಜೀಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 28ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಹುಚ್ಚಯ್ಯನವರ ಆಸ್ತಿಗೆ ಹಕ್ಕುದಾರರಾಡ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1884ನೇ ಇಸವಿ ಜುಲೈ ತಿಂಗಳು 30ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಸಿ. ಕ್ರೈಸ್,
ಸಬ ಜಡ್ಜ.

ಮೈಸೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು ಜಡ್ಜ್‌ರವರ ಕೋರ್ಟಿನಲ್ಲಿ

1884ನೇ ಇಸವಿ ಅರ್ಜೀ ನಂಬರ್ 265.

ಮೃತಪಟ್ಟ ಪಟೇಲ್ ಬಟ್ಟ್ಯೇಗವ್ವಡನ ಆಸ್ತಿ ವಿಷಯದಲ್ಲಿ—

ಡಿಟೋಯವನ ಮಗ ಬೆಟ್ಟ್ಯ ವೈನರ್, ಗಾರ್ಡಿಯರ್ ಇವನ ತಾಯಿ ಅರ್ಜೀದಾರಳಾದ ದ್ಯಾವಮ್ಮ, ಮೃತಪಟ್ಟ ಸದರೀ ಪಟೇಲ್ ಬಟ್ಟ್ಯೇಗವ್ವಡನಿಗೆ ಹೆಂಡತಿ ಮತ್ತು ಮಗನು ಆಗಬೇಕೆಂಬ ಹಕ್ಕುದಾರೀ ಮೇಲೆ ಶ್ರೀರಂಗಪಟ್ಟಣದ ತಾ॥ ಕ್ಯಾತನಹಳ್ಳಿ ಹೋಬಳಿ ಮಂಚನಹಳ್ಳಿ ಗ್ರಾಮದ ಸ್ಥಳದ ಬೆಟ್ಟ್ಯ ವೈನರ್, ಗಾರ್ಡಿಯರ್ ದ್ಯಾವಮ್ಮನು ಡಿಟೋ ಸ್ಥಳದ ವಾಸಸ್ಥನಾಗಿ ಮೃತಪಟ್ಟ ಬೆಟ್ಟ್ಯೇಗವ್ವಡನ ಜಿಂದಗಿ ಬಗ್ಯಾಗಿ ಬರತಕ್ಕ 1,000 ರೂಪಾಯಿಗಳ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವೀ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿ ಇರುತ್ತಾರೆ.

ಸದರೀ ದರಖಾಸ್ತುದಾರರಾದ ಬಟ್ಟ ವೈನರ್, ಗಾರ್ಡಿಯರ್ ದ್ಯಾವಮ್ಮ ಇವರ ಅರ್ಜಿಯನ್ನು 1884ನೇ ಆಗಸ್ಟು ತಿಂಗಳು ತಾರೀಖು 29ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಪಟೇಲ್ ಬಟ್ಟ್ಯೇಗವ್ವಡನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.